ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ. ಹುಬ್ಬಳ್ಳಿಯಲ್ಲಿರುವ ಐಟಿ ಪಾರ್ಕ್ ಈಗಾಗಲೇ ಕಾರ್ಯ ಪ್ರಾರಂಭಿಸಿದೆ. ಈಗಾಗಲೇ ಈ ಕೇಂದ್ರದಲ್ಲಿ ಕೆಲವು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.

ಆ. ಐಟಿ ಮತ್ತು ಬಿಟಿ ಕಂಪನಿಗಳು ಈ ಪಾರ್ಕ್‌ನಲ್ಲಿ ಅಗತ್ಯವಾದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಹುಬ್ಬಳ್ಳಿ ನಗರವನ್ನು ಸಹ ಅಭಿವೃದ್ಧಿ ಪಡಿಸಲು ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಇ. ಉದ್ಭವಿಸುವುದಿಲ್ಲ.

ಈ. ಐಟಿ ಮತ್ತು ಬಿಟಿ ಕಂಪನಿಯವರು ಹುಬ್ಬಳ್ಳಿಯ ಕೇಂದ್ರಸ್ಥಳಕ್ಕೆ ಬಂದು ಉದ್ಯೋಗ ಪ್ರಾರಂಭಿಸಿದರೆ ಖಂಡಿತ ಉತ್ತರ ಕರ್ನಾಟಕ ಅಭಿವೃದ್ಧಿ ಹೊಂದುತ್ತದೆ.

ಉ. ಈ ನಿಟ್ಟಿನಲ್ಲಿ ಐಟಿ ಕಂಪನಿಗಳು ಹುಬ್ಬಳ್ಳಿಯೂ ಸೇರಿದಂತೆ ಉತ್ತರ ಕರ್ನಾಟಕ ಭಾಗದಲ್ಲಿ ತಮ್ಮ ಚಟುವಟಿಕೆಗಳನ್ನು ಪ್ರಾರಂಭಿಸುವಂತೆ ಮನವೊಲಿಸಲಾಗುತ್ತಿದೆ, ಮತ್ತು ಅವುಗಳಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು, ಅಂದರೆ ರಸ್ತೆ ಅಭಿವೃದ್ಧಿ ವಿಮಾನ ನಿಲ್ದಾಣಗಳ ಸ್ಥಾಪನೆ, ನೀರು ಮುಂತಾದ ವ್ಯವಸ್ಥೆಯನ್ನು ಸರಿಪಡಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಎಸ್.ಟಿ.ಪಿ.ಐ. ಅವರೂ ಸಹ ನ್ನು ಸಹ ಸ್ಥಾಪಿಸಿದ್ದಾರೆ. ಈ ಪಾರ್ಕ್‌ಗೆ ಐಟಿ ಕಂಪನಿಗಳು ಆಕರ್ಷಿಸುವ ಸಲುವಾಗಿ ಸರ್ಕಾರವು ಸ್ಥಳೀಯ ಚೇಂಬರ್ ಆಫ್ ಕಾಮರ್ಸ್, ಜಿಲ್ಲಾಡಳಿತದ ಸಹಯೋಗದಿಂದ ಮೇ 2006ರ ಕೊನೆಯಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ನಡೆಸಲು ಉದ್ದೇಶಿಸಲಾಗಿದೆ.

208 (76): ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಶ್ರೀ ಬಿ. ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಜವಳಿ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಹುಬ್ಬಳ್ಳಿ ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ಒಂದು ಸುಂದರವಾದಂತಹ ಪ್ರವಾಸ ತಾಣ ನಿರ್ಮಿಸುವ ವಿಚಾರ ಸರ್ಕಾರದ ಮುಂದಿದೆಯೇ;

ಆ. ಹಾಗಿದ್ದಲ್ಲಿ, ಪ್ರವಾಸ ತಾಣ ನಿರ್ಮಿಸಲು ಆಯ್ಕೆ ಮಾಡಿರುವ ಸ್ಥಳ ಯಾವುದು;

ಇ. ಇದಕ್ಕಾಗಿ, ನೀಲಿ ನಕ್ಷೆ ಹಾಗೂ ಅಂದಾಜು ಪತ್ರಿಕೆ ಸಿದ್ಧವಾಗಿದೆಯೇ;

ಈ. ಸಿದ್ಧಪಡಿಸದಿದ್ದಲ್ಲಿ ಅದಕ್ಕೆ ಮುಖ್ಯ ಕಾರಣಗಳಾವುವು?

ಶ್ರೀ ಬಿ. ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಜವಳಿ ಸಚಿವರು)

ಅ. ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ಒಂದು ಸುಂದರವಾದಂತಹ ಪ್ರವಾಸಿ ತಾಣ ನಿರ್ಮಿಸುವ ವಿಚಾರ ಪ್ರವಾಸೋದ್ಯಮ ಇಲಾಖೆಯ ಮುಂದಿರುವುದಿಲ್ಲ.

ಆ. ಉದ್ಭವಿಸುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ಈ. ಉದ್ಭವಿಸುವುದಿಲ್ಲ.

209 (410): ಶ್ರೀ ಐವಾನ್ ನಿಗ್ಲಿ (ನಾಮಾಂಕಿತ)

ಶ್ರಿ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು

ಅ. ಬಹಳಷ್ಟು ನಿರೀಕ್ಷಣಾ ಮಂದಿರ ಹಾಗೂ ಪ್ರವಾಸಿ ಮಂದಿರಗಳ ಕೊಠಡಿಗಳು ಸರಿಯಾಗಿ ನಿರ್ವಹಣೆ ಮಾಡದೆ ಇರುವುದರಿಂದ ಇಲ್ಲಿ ಉಳಿದುಕೊಳ್ಳುವವರ ಆರೋಗ್ಯಕ್ಕೆ ಹಾನಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಇದರ ನಿರ್ವಹಣೆ ಉಸ್ತುವಾರಿ ಅಧಿಕಾರಿಗಳು (ಮೇಟಿ) ತಮ್ಮ ಅಧಿಕಾರವನ್ನು ದುರುಪಯೋಗ ಮಾಡಿಕೊಂಡು ಕೊಠಡಿಗಳನ್ನು ರಿಜಿಸ್ಟರ್‌ನಲ್ಲಿ ನೊಂದಾಯಿಸದೇ ಖಾಸಗಿಯವರಿಗೆ ಅನಧಿಕೃತವಾಗಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ. ಈ ರೀತಿ ಅನಧಿಕೃತವಾಗಿ ವಾಸಿಸುತ್ತಿರುವುದರಿಂದ ಸರ್ಕಾರಕ್ಕೆ ನಷ್ಟ ಉಂಟಾಗಲು ಮುಖ್ಯ ಕಾರಣವಾಗುತ್ತದೆ; ಇದರಿಂದ ಕೊಠಡಿಗಳು ಅವ್ಯವಸ್ಥೆಯಲ್ಲಿರುವುದು ವಾಸ್ತವವಲ್ಲವೇ;

ಈ. ಸದರಿ ಸಂಕೀರ್ಣಗಳನ್ನು ಶುಚಿತ್ವವಾಗಿ ಇಡುವುದರಿಂದ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡುಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು)

ಅ. ಇಲ್ಲ.

ಆ. ಇಲ್ಲ.